ಅಸಲು ದಾವಾ ಸಂಖ್ಯೆ ಃ 355/2015

ಡಿಡಬ್ಲ್ಯೂ ಃ 1

ದಿನಾಂಕ ಃ 13.12.2017. ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು. ಮುಂದುವರಿದ ಮುಖ್ಯ ವಿಚಾರಣೆ ವಾದಿ ಪರ ವಕೀಲರಾದ ಶ್ರೀ. ಸಿ ಆರ್ ಬಿ ರವರಿಂದಃ

ನಾನು ದಾವಾ ಆಸ್ತಿಗೆ ಸಂಬಂಧಿಸಿದ ನೋಂದಾಯಿತ ಕ್ರಯಪತ್ರದ ಮೂಲ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ಪ್ರತಿವಾದಿಗಳ ಪರ ವಕೀಲರ ತಕರಾರಿಗೆ ಒಳಪಟ್ಟು ನಿಪಿ.4 ಎಂದು ಗುರುತಿಸಲಾಯಿತು. ದಾವಾ ಆಸ್ತಿಗೆ ಸಂಬಂಧಿಸಿದ ಇಂಡೆಕ್ಸ್ ಆಫ್ ಲ್ಯಾಂಡ್ಸ್ ಪ್ರತಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ಪ್ರತಿವಾದಿಗಳ ಪರ ವಕೀಲರ ತಕರಾರಿಗೆ ಒಳಪಟ್ಟು ನಿಪಿ.5 ಎಂದು ಗುರುತಿಸಲಾಯಿತು. ಸರ್ವೆ ನಂ.87 /1ಸಿ ಜಮೀನಿಗೆ ಸಂಬಂಧಿಸಿದಂತೆ 2011-12ನೇ ಸಾಲಿನ ಒಂದು ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ.6 ಎಂದು ಗುರುತಿಸಲಾಯಿತು.

ಪಾಟೀ ಸವಾಲು ಪ್ರತಿವಾದಿಗಳ ಪರ ವಕೀಲರು ಸಮಯ ಕೋರಿದ್ದರಿಂದ ಸಮಯವನ್ನು ನೀಡಲಾಯಿತು.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಸರಿ ಇದೆ

ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ
ಗುಬ್ಬಿ